ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 27/09/2019

# ಅಧಿವೇಶನ 10 ದಿನ ಸಾಧ್ಯತೆ

27-9-19

ಬೆಂಗಳೂರು: ವಿಧಾನಸಭೆ ಉಪ ಚುನಾವಣೆಗೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿರುವ ಹಿನ್ನೆಲೆಯಲ್ಲಿ ಮೂರು ದಿನಗಳಿಗೆ ಸೀಮಿತಗೊಂಡಿದ್ದ ವಿಧಾನ ಮಂಡಲ ಅಧಿವೇಶನವನ್ನು ಹತ್ತು ದಿನಗಳಿಗೆ ವಿಸ್ತರಿಸಲು ಸರ್ಕಾರ ಮುಂದಾಗಿದೆ.

ಚುನಾವಣೆ ದಿನಾಂಕ ಘೋಷಣೆಯಾದ ನಂತರ ಅಧಿವೇಶನದ ವೇಳಾಪಟ್ಟಿಯನ್ನು ಪರಿಷ್ಕರಿಸಿದ್ದು, ಅಕ್ಟೋಬರ್ 10ರಿಂದ 12ರ ವರೆಗೆ ಮೂರು ದಿನಗಳ ಕಾಲ ನಡೆಸಲು ನಿರ್ಧರಿಸಿತ್ತು. ಈಗ ಚುನಾವಣೆ ಪ್ರಕ್ರಿಯೆಗೆ ಕೋರ್ಟ್ ತಡೆ ನೀಡಿರುವುದರಿಂದ ಹತ್ತು ದಿನಗಳಿಗೆ ವಿಸ್ತರಿಸಲಾಗುತ್ತದೆ ಎಂದು ಮೂಲಗಳು ತಿಳಿಸಿವೆ.

ಈ ಹಿಂದೆ ಅ. 14ರಿಂದ 26ರ ವರೆಗೆ ಅಧಿವೇಶನ ನಡೆಸಲು ಸರ್ಕಾರ ನಿರ್ಧರಿಸಿತ್ತು. ಆದರೆ ಅದೇ ಸಮಯಕ್ಕೆ ಚುನಾವಣೆ ದಿನಾಂಕ ಘೋಷಣೆಯಾದ ಹಿನ್ನೆಲೆಯಲ್ಲಿ ಮೂರು ದಿನಗಳಿಗೆ ಅಧಿವೇಶನ ನಡೆಸಲು ಸೀಮಿತಗೊಳಿಸಲಾಗಿತ್ತು. ಚಳಿಗಾಲದ ಅಧಿವೇಶನ ಸಾಮಾನ್ಯ ವಾಗಿ ಬೆಳಗಾವಿಯಲ್ಲಿ ನಡೆಸುವುದು ವಾಡಿಕೆ. ಬೆಳಗಾವಿ ಜಿಲ್ಲೆಯಲ್ಲಿ ನೆರೆ ಹಾವಳಿಯ ಕಾರಣ ಅಧಿವೇಶನ ಬೆಂಗಳೂರಿನಲ್ಲೇ ನಡೆಸಲು ತೀರ್ಮಾನಿಸಲಾಗಿದೆ.